# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ – ಅಧಿಕಾರಿಗಳಿಗೆ ಆಡಳಿತ ವ್ಯವಸ್ಥೆಯ ಜವಾಬ್ದಾರಿ ವಹಿಸುವ ಬಗ್ಗೆ.

**ಪ್ರಸ್ತಾವನೆ :**

ಸರ್ವ ಶಿಕ್ಷಾ ಅಭಿಯಾನ ಕಾರ್ಯಕ್ರಮವು ಕಳೆದ 8 ವರ್ಷಗಳಿಂದ ಪ್ರಾಥಮಿಕ ಶಾಲೆಗಳಲ್ಲಿ ಜಾರಿಯಲ್ಲಿದೆ. ಈ ಕಾರ್ಯಕ್ರಮಕ್ಕೋಸ್ಕರ ಪ್ರತ್ಯೇಕ ಸಂಘವೊಂದನ್ನು ರಚನೆ ಮಾಡಿ ಸದರಿ ಯೋಜನೆ ಅನುಷ್ಠಾನಕ್ಕೆ ರಾಜ್ಯ ಯೋಜನಾ ನಿರ್ದೇಶಕರು ಎಂದು ನೇಮಕ ಮಾಡಲಾಗಿದೆ. ಈಗಿನ ಮಾಹಿತಿ ಪ್ರಕಾರ ಸರ್ವ ಶಿಕ್ಷಾ ಅಭಿಯಾನ ಯೋಜನೆಯು ಮಾರ್ಚ್ 31, 2010ಕ್ಕೆ ಕೊನೆಗೊಳ್ಳಲಿದ್ದು, ಅನಂತರ ಇನ್ನೂ 1 ಅಥವಾ 2 ವರ್ಷಕ್ಕೆ ಸದರಿ ಯೋಜನೆಯನ್ನು ವಿಸ್ತರಿಸುವ ಸಾಧ್ಯತೆ ಇರುತ್ತದೆ. 2008–09ರಲ್ಲಿ ಪ್ರೌಢಶಾಲೆಗಳಿಗಾಗಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನವೆಂದು ಜಾರಿಗೆ ಬಂದಿರುತ್ತದೆ. ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಯೋಜನೆಗೆ ಪ್ರತ್ಯೇಕವಾದ ಸಂಘವೊಂದನ್ನು ಸ್ಥಾಪನೆ ಮಾಡಲಾಗಿದೆ.

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಯೋಜನೆಯ ಜವಾಬ್ದಾರಿಯನ್ನು ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ವಹಿಸಿ, ಅವರನ್ನು ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಾ ಅಭಿಯಾನ ಮತ್ತು ~~ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನವೆಂದು ನೇಮಕ ಮಾಡುವುದು ಸೂಕ್ತ ಎಂದು ಸರ್ಕಾರವು ಮನಗೊಂಡಿದೆ.~~ ಅಲ್ಲದೇ, ಸರ್ವ ಶಿಕ್ಷಾ ಅಭಿಯಾನ ಕಾರ್ಯಕ್ರಮದ ಅನುಷ್ಠಾನದಲ್ಲಿ ಸಾಕಷ್ಟು ಅನುಭವ ಇರುವ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಸರ್ವ ಶಿಕ್ಷಾ ಅಭಿಯಾನದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಇವರುಗಳ ಸೇವೆಯನ್ನು ಹೊಸ ಯೋಜನೆಯ ಅನುಷ್ಠಾನಕ್ಕೆ ವಹಿಸುವುದು ಸೂಕ್ತವೆಂದು ಸರ್ಕಾರವು ಭಾವಿಸುತ್ತದೆ. ಅಲ್ಲದೇ, ಪ್ರೌಢಶಾಲೆಗೆ ಸಂಬಂಧಿಸಿರುವ ವಿಷಯಗಳ ಬಗ್ಗೆ ಕೆಲವು ಅಧಿಕಾರಿಗಳನ್ನು ಹಾಗೂ ತಜ್ಞರನ್ನು ಮಾತ್ರ ನೇಮಕ ಮಾಡುವ ಅವಶ್ಯಕತೆ ಎದುರಾಗಿರುತ್ತದೆ.

ಆದ್ದರಿಂದ, ಈ ಎಲ್ಲಾ ಅಂಶಗಳನ್ನು ಸರ್ಕಾರವು ಸಕಲ ವಲಯದಿಂದ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 80 ಯೋಯೋಕ 2009, ಬೆಂಗಳೂರು; ದಿನಾಂಕ : 28-08-2009**

**[ಇಡಿ 110 ಸ್ಕೀಮರ (ಯುನಿಕ್) 2009, ದಿನಾಂಕ : 28–08–2009]**

~~ಪ್ರಸ್ತಾವನೆಯಲ್ಲಿ ವಿವರಿಸಲಾದ ಸನ್ನಿವೇಶದಲ್ಲಿ 2008–09ರಲ್ಲಿ ಪ್ರೌಢಶಾಲೆಗಳಿಗಾಗಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ~~ ಅಭಿಯಾನವು ಜಾರಿಗೆ ಬಂದಿದ್ದು, ಈ ಕಾರ್ಯಕ್ರಮವನ್ನು ಸುಗಮವಾಗಿ ಹಾಗೂ ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸಲು ಮುಂದಿನ ಆದೇಶ ಹೊರಡಿಸುವವರೆಗೆ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಾ ಅಭಿಯಾನ ಇವರನ್ನು ರಾಜ್ಯ ಯೋಜನಾ ನಿರ್ದೇಶಕರು ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಎಂದು ನೇಮಿಸಲಾಗಿದೆ.

ಸರ್ವ ಶಿಕ್ಷಾ ಅಭಿಯಾನ ಕಛೇರಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ 3 ಜಂಟಿ ನಿರ್ದೇಶಕರ ಪೈಕಿ ಒಬ್ಬ ಜಂಟಿ ನಿರ್ದೇಶಕರಿಗೆ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ ಕಾರ್ಯಕ್ರಮದ ಜವಾಬ್ದಾರಿಯನ್ನು ವಹಿಸಿದೆ. ಸರ್ವ ಶಿಕ್ಷಾ ಅಭಿಯಾನ ಕಛೇರಿಯಲ್ಲಿ ಅನುಭವವಿರುವ ಕೆಲವು ಅಧಿಕಾರಿ : ಸಿಬ್ಬಂದಿಗಳನ್ನು ಗುರ್ತಿಸಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ ಜವಾಬ್ದಾರಿಯನ್ನು ವಹಿಸಲು ಹಾಗೂ ಅದೇ ರೀತಿ ಜಿಲ್ಲಾ ಮಟ್ಟದಲ್ಲಿ ಉಪ ನಿರ್ದೇಶಕರು, ಉಪ ಯೋಜನಾ ಸಂಯೋಜನಾಧಿಕಾರಿಗೆ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಾ ಅಭಿಯಾನ ಕಾರ್ಯಕ್ರಮದ ಜವಾಬ್ದಾರಿಯನ್ನು

ವಹಿಸಲಾಗಿದೆ ಹಾಗೂ ಉಪ ಯೋಜನಾ ಸಂಯೋಜನಾಧಿಕಾರಿಗೆ, ಕೆಲಸ ಮಾಡುವಂತೆ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಕಾರ್ಯಕ್ರಮದ ಅನುಷ್ಠಾನದ ಜವಾಬ್ದಾರಿಯನ್ನು ವಹಿಸಲಾಗಿದೆ. ಈ ಎಲ್ಲಾ ವ್ಯವಸ್ಥೆಯನ್ನು ಸಾರ್ವಜನಿಕ ಶಿಕ್ಷಣ ಆಯುಕ್ತರು, ಬೆಂಗಳೂರು ಹಾಗೂ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಇವರುಗಳು ಜವಾಬ್ದಾರಿ ವಹಿಸುವ ಬಗ್ಗೆ ಸೂಕ್ತವಾದ ಆದೇಶ ಹೊರಡಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಐ.ಎಫ್. ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ).

ಇವರಿಗೆ :

1. ಮಹಾಲೇಖಪಾಲಕರು, (ಆಡಿಟ್ 1 & 2). ಕರ್ನಾಟಕ ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು–1.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ/ಧಾರವಾಡ.
5. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
6. ನಿರ್ದೇಶಕರು (ಪ್ರೌಢಶಿಕ್ಷಣ)/ (ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಎಲ್ಲಾ ಉಪ ನಿರ್ದೇಶಕರು; ಸಾರ್ವಜನಿಕ ಶಿಕ್ಷಣ ಇಲಾಖೆ (ಆಯುಕ್ತರ ಮುಖಾಂತರ)
8. ಖಜಾನಾಧಿಕಾರಿಗಳು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಉಪ ನಿರ್ದೇಶಕರು ಖಜಾನೆ (ಎಸ್.ಎಮ್.ಸಿ), ಖನಿಜ ಭವನ, ನಂ.45, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ–2, ಆರ್ಥಿಕ ಇಲಾಖೆ. ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ ವೆಚ್ಚ–8, ಆರ್ಥಿಕ ಇಲಾಖೆ, ಬೆಂಗಳೂರು.
13. ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು.
15. ಮಾಸಿಕ ಸಂಕಲನ / ಸಾಪ್ತಾಹಿಕ ರಾಜ್ಯ ಪತ್ರ / ಹೆಚ್ಚುವರಿ ಪ್ರತಿಗಳು.